**ಸಾಕ್ಷಿಗೆ ದಿನಾಂಕಃ 14.01.2026 ರಂದು ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲುಃ ಶ್ರೀ. ಪಿ.ಎಸ್. ವಕೀಲರಿಂದಃ**

ನಾನು ಈಗ ಯರಗನಹಳ್ಳಿ ಮೈಸೂರಿನಲ್ಲಿ ವಾಸವಿರುತ್ತೇನೆ ಎಂದರೆ ಸರಿ. ವಾದ ಪತ್ರದ ಶೀರ್ಷಿಕೆಯಲ್ಲಿ ತೋರಿಸಿದ ವಿಳಾಸದಲ್ಲಿ ನಾನು ವಾಸವಿರುವ ಬಗ್ಗೆ ದಾಖಲೆಗಳು ಇರುತ್ತದೆ. ಈ ಸಂಬಂಧ ಪಡಿತರ ಚೀಟಿ ಇರುತ್ತದೆ. ಅದನ್ನು ಹಾಜರುಪಡಿಸಲು ತೊಂದರೆ ಇರುವುದಿಲ್ಲ. ಸದರಿ ವಿಳಾಸದ ಆಸ್ತಿಯನ್ನು ಈ ದಾವೆಯಲ್ಲಿ ಸೇರಿಸಿರುತ್ತೇನೆ. ನಮ್ಮ ತಂದೆಯ ಹೆಸರಿನಲ್ಲಿರುವ ದಿ.05.04.1984 ರ ಕ್ರಯಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ಮೂಲ ದಾಖಲೆ ನಮ್ಮ ಮನೆಯಲ್ಲಿ ಇರುತ್ತದೆ. ಅದನ್ನು ಹಾಜರುಪಡಿಸಲು ತೊಂದರೆ ಇರುವುದಿಲ್ಲ. ಸಾಕ್ಷಿಯು ತಾನು ಹಾಜರುಪಡಿಸಿದ ದಿನಾಂಕ.24.11.2015 ರ ದೃಢೀಕೃತ ಕ್ರಯಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.18 ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಸಾಕ್ಷಿಯು ತನ್ನ ಹಾಗೂ 2 ನೇ ವಾದಿ, 1 ನೇ ಪ್ರತಿವಾದಿ, 1 ನೇ ಪ್ರತಿವಾದಿಯ ಹೆಂಡತಿ ಮಂಜುಳ ರವರುಗಳ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. 1984 ರಲ್ಲಿ 5 ನೇ ಪ್ರತಿವಾದಿ, 1 ನೇ ಪ್ರತಿವಾದಿ, 1 ನೆ ಪ್ರತಿವಾದಿಯ ತಾಯಿ ಪುಟ್ಟಮಾದಮ್ಮ ಮತ್ತು 2 ರಿಂದ 4 ನೇ ಪ್ರತಿವಾದಿಗಳು ಒಟ್ಟು ಕುಟುಂಬದಲ್ಲಿ ವಾಸ ಮಾಡುತ್ತಿದ್ದರು ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಯು ಮುಂದುವರೆದು ನಾನು ಆ ಸಮಯದಲ್ಲಿ ಜನಿಸಿರಲಿಲ್ಲ ಎಂದು ನುಡಿದಿರುತ್ತಾರೆ. 1 ನೇ ದಾವಾ ಸ್ವತ್ತನ್ನು ಪ್ರತಿವಾದಿಗಳು ಮತ್ತು ಪುಟ್ಟಮಾದಮ್ಮ ವ್ಯವಸಾಯ ಮಾಡುತ್ತಿದ್ದರು ಎಂದರೆ ಸರಿ.

(ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ನೀಡಲಾಯಿತು)

**(ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಒ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ. ತಿ.ನರಸೀಪುರ.**